# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-152 ಎಸ್.ಜಿ.ಪಾಳ್ಯ ಕಛೇರಿಯಲ್ಲಿ ದಿನಾಂಕ: 06.08.2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು

* * * * * *

ದಿನಾಂಕ-06-08-2022 ರಂದು ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಹೊಸದಾಗಿ ನಿಯೋಜನೆಗೊಂಡಿರುವ ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲ್ಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಮೊದಲಿಗೆ ಸಭೆಗೆ ಹಾಜರಿದ್ದ ಎಲ್ಲಾ ಇಲಾಖೆಯ ಅಧಿಕಾರಿಗಳು/ಸಿಬ್ಬಂದಿವರ್ಗ ಮತ್ತು ವಾರ್ಡ್ ಸದಸ್ಯರನ್ನು ಪರಿಚಯ ಮಾಡುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

ಸಭೆಗೆ ಹಾಜರಿದ್ದ ಅಧಿಕಾರಿ ವರ್ಗ/ ಸದಸ್ಯರು

| ಕ್ರಮ .ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| ೦೧ | ಶ್ರೀ.ಅಶೋಕ್.ಎಸ್.ಬಿರಾದಾರ ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಟಿ.ಎಂ ಲೇಔಟ್ ಉಪವಿಭಾಗ | 9008658224 |
| ೦೨ | ಶ್ರೀ.ಸತೀಶ್.ಡಿ ಸಹಾಯಕ ಅಭಿಯಂತರರು ವಾರ್ಡ್152 ಎಸ್.ಜಿ.ಪಾಳ್ಯ | 9480688152 |
| ೦೩ | ಶ್ರೀ.ಅಜಯ್‌ಕುಮಾರ್ ಕಿರಿಯ ಆರೋಗ್ಯ ಪರಿವೀಕ್ಷಕರು | 9632222304 |
| ೦೪ | ಶ್ರೀ. ಮಲ್ಲಿಕಾರ್ಜುನ್ ಬಿರಾದರ ಹಿರಿಯ ಆರೋಗ್ಯ ಪರಿವೀಕ್ಷಕರು | 9945042307 |
| ೦೫ | ಶ್ರೀ.ಸುರೇಶ್ ಎ.ಎಸ್.ಐ ಎಸ್.ಜಿ.ಪೋಲಿಸ್ ಠಾಣೆ | 8123010522 |
| ೦೬ | ಶ್ರೀ.ಹೋಲಿಯಪ್ಪ ಮಾರ್ಷ್‌ಲ್ | 8904349926 |
| ೦೭ | ಶ್ರೀ.ಡಾ॥ ಗ್ವತಮ್ ಪ್ರಕಾಶ್ ಹೆಚ್ ಮೆಡಿಕಲ್ ಆಫಿಸರ್ | 9986000094 |
| ೦೮ | ಶ್ರೀ.ಮುನಿಂದ್ರ ಮೇಲ್ವಿಚಾರಕರು ಫ.ತ್ಯಾನಿ | 9901002067 |
| ೦೯ | ಶ್ರೀ ರಮೇಶ್ ಸದಸ್ಯರು | 9731108622 |
| ೧೦ | ಶ್ರೀ.ಗಂಗಾದ್ರೀ ಮೇಲ್ವಿಚಾರಕರು ಫ.ತ್ಯಾನಿ | 9980225272 |
| ೧೧ | ಶ್ರೀ.ಎನ್.ಲೋಕೇಶ್ ಸದಸ್ಯರು | 9448579144 |
| ೧೨ | ಶ್ರೀಮತಿ.ಭೂದೇವಿ ಕೆಲಸ ಪರಿವೀಕ್ಷರು ತೋಟಗಾರಿಕೆ ಇಲಾಖೆ | 9740903427 |
| ೧೩ | ಶ್ರೀ.ವೀರುಪಾಕ್ಷಿ.ವಿ. ಎ.ಎಸ್.ಐ ಮಡಿವಾಳ ಪೋಲೀಸ್ ಠಾಣೆ | 8310086006 |
| ೧೪ | ಶ್ರೀ ಯಶವಂತ.ಎನ್ ಕೆಲಸ ಪರಿವೀಕ್ಷಕರು ಬಿ.ಡಬ್ಲೂ.ಎಸ್.ಎಸ್.ಬಿ | 9611918180 |
| ೧೫ | ಶ್ರೀ.ಕಮ್ರನ್ ಮೆಡಿಕಲ್ ಆಫಿಸರ್ ಎಸ್.ಜಿ.ಪಾಳ್ಯ | 9620206422 |
| ೧೬ | ಶ್ರೀ.ಜ್ಞಾನೇಶ್.ಪಿ ಸಹಾಯಕ ಅಭಿಯಂತರರು ವಿದ್ಯುತ್ ವಿಭಾಗ ಬಿ.ಬಿ.ಎಂ.ಪಿ | 7411536847 |
| ೨೦ | ಶ್ರೀ.ಸೈಯದ್ ನಜಾರೂದ್ದಿನ ಸದಸ್ಯರು | 9741518897 |
| ೨೧ | ಶ್ರೀ.ಬಿ.ಟಿ.ಕೃಷ್ಣಮೂರ್ತಿ | 9902532550 |
| ೨೨ | ಶ್ರೀಮತಿ.ಆಶಾ ಬೆಸ್ಕಾಂ ಇಂಜಿನಿಯರ್ | 9900724229 |

1) ಸಭೆಯಲ್ಲಿ ಹಾಜರಿದ್ದ, ಶ್ರೀ ಸೈಯದ್ ನಜರೂದ್ದೀನ್ ಮಾತನಾಡಿ, ಬಾಲಾಜಿನಗರ ಪ್ರದೇಶದಲ್ಲಿ ಅಳವಡಿಸಿರುವ ಸಿ.ಸಿ.ಟಿ.ವಿ ಕ್ಯಾಮರಗಳು ಕಾರ್ಯನಿರ್ವಹಿಸುತ್ತಿಲ್ಲ ಈ ಸಂಬಂಧ ಸದರಿ ಕ್ಯಾಮರಗಳನ್ನು ದುರಸ್ಥಿಪಡಿಸಬೇಕೆಂದು ಸಭೆಗೆ ತಿಳಿಸಿದರು, ಈ ಬಗ್ಗೆ ಸಭೆಗೆ ಹಾಜರಿದ್ದ ವಾರ್ಡ್ ಅಭಿಯಂತರರು ಮಾತನಾಡಿ ಸದರಿ ಕ್ಯಾಮರಗಳ ದುರಸ್ಥಿ ಮತ್ತು ನಿರ್ವಹಣೆ ಕಾಮಗಾರಿಯನ್ನು ಈಗಾಗಲೇ ಪಾಲಿಕೆಯ 2022-23ನೇ ಸಾಲಿ ಆಯ್ಯವ್ಯಯ ಅನುದಾನದಡಿ ಕ್ರೀಯಾಯೋಜನೆಯನ್ನು ಕಳುಹಿಸಿಕೊಳ್ಳಲಾಗಿದೆ. ಅನುಮೋದನೆಗೊಂಡನಂತರ ದುರಸ್ಥಿ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು.

2) ಅದೇ ರೀತಿ ಶ್ರೀ ಸೈಯದ್ ನಜರೂದ್ದಿನ್ ರವರು ಮಾತನಾಡಿ, 6ನೇ ಅಡ್ಡರಸ್ತೆ ಬಾಲಾಜಿನಗರ ಪ್ರದೇಶದಲ್ಲಿನ ಮಳೆ ನೀರುಗಾಲವೆ ದುರಸ್ಥಿ ಕಾಮಗಾರಿ ಪ್ರಾರಂಭಿಸಿ, ಗಾಲುವೆಯ ತಡೆಗೊಡೆ ಒಡೆದಿರುವುದರಿಂದ ಮಳೆ ನೀರು ಹೊರಗಡೆ ಬಂದು ಅಲ್ಲಿನ ಸುತ್ತಮತ್ತು ಮನೆಗಳಿಗೆ ನೀರು ನುಗ್ಗಿರುತ್ತವೆ. ಇದರಿಂದ ತುಂಬ ತೊಂದರೆಯಾಗಿರುತ್ತದೆ ಕೂಡಲೇ ದುರಸ್ಥಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಕೈಗೊಂಡು ಪೂರ್ಣಗೊಳಿಸಲು ಸಭೆಗೆ ತಿಳಿಸಿದರು. ಈ ಬಗ್ಗೆ ಮಾನ್ಯ ಸಭಾಧ್ಯಕ್ಷರು ಮಾತನಾಡಿ ಪ್ರಸ್ತಾಪಿತ ವಿಷಯುದ ಬಗ್ಗೆ ಸಂಬಂಧ ಪಟ್ಟ ಅಧಿಕಾರಿಗಳಿಂದ ಕ್ರಮವಹಿಸಲು ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

ಎತ್ತಿ ಅನುಪಯುಕ್ತ ಮಣ್ಣನ್ನು ಹಾಗೆಯೇ ಬಿಟ್ಟಿರುವುದರಿಂದ ಹಾಲಿ ಮಳೆ ಸುರಿಯುತ್ತಿರುವುದರಿಂದ ಸದರಿ ಮಣ್ಣು ಚರಂಡಿಯೊಳಗೆ ಹರಿಯುತ್ತದೆ ಮತ್ತು ಅಲ್ಲಿನ ವಾಹನ ಸವಾರರಿಗೆ ತೊಂದರೆಯಾಗುತ್ತಿರುತ್ತದೆ ಕೂಡಲೇ ಮಣ್ಣನ್ನು ತೆರವುಗೊಳಿಸಲು ಸಭೆಗೆ ತಿಳಿಸಿದರು. ಈ ಸಂಬಂಧ ವಾರ್ಡ್ ಅಭಿಯಂತರರು ಮಾತನಾಡಿ ಸದರಿ ಕಾಮಗಾರಿಯ ಗುತ್ತಿಗೆದಾರರಿಂದ ತೆರವುಗೊಳಿಸುವುದಾಗಿ ಸಭೆಗೆ ತಿಳಿಸಿದರು.

4) ಕಳೆದ ಸಭೆಯಲ್ಲಿ ಶ್ರೀ ಬಿ.ಟಿ.ಕೃಷ್ಣಮೂರ್ತಿರವರು ಪ್ರಸ್ತಾಪಿಸಲಾಗಿದ್ದ, ಕ್ರೈಸ್ಟ್ ಕಾಲೇಜು ಹಿಂಭಾಗದ ಗೇಟ್‌ನ ರಸ್ತೆಯಲ್ಲಿ ವಾಹನಗಳು ಪಾರ್ಕಿಂಗ್ ಮಾಡುತ್ತಿರುವುದು ಹೆಚ್ಚಾಗುತ್ತಿರುತ್ತದೆ. ಇದರಿಂದ ಸದರಿ ರಸ್ತೆಯಲ್ಲಿ ಸುಗಮ ಸಂಚಾರಕ್ಕೆ ಅಡಚಣೆಯಾಗುತ್ತಿರುತ್ತದೆ. ಆದುದರಿಂದ ಸದರಿ ಸ್ಥಳದಲ್ಲಿ ವಾಹನಗಳು ನಿಲುಗಡೆಗೆ ಅವಕಾಶ ನೀಡಬಾರದೆಂದು ಸಭೆಗೆ ತಿಳಿಸಿದರು. ಈ ಸಂಬಂಧ ಈಗಾಗಲೇ ಸಂಚಾರಿ ಪೊಲೀಸ್ ಠಾಣೆ ಮತ್ತು ಕ್ರೈಸ್ಟ್ ಕಾಲೇಜು ವಿದ್ಯಾಸಂಸ್ಥೆಯ ಆಡಳಿತ ಮಂಡಳಿಯವರಿಗೆ ಪತ್ರವನ್ನು ವ್ಯವಹರಿಸಲಾಗಿದೆ ಎಂದು ವಾರ್ಡ್ ಅಭಿಯಂತರರು ತಿಳಿಸಿದರು.

5) ಅದೇ ರೀತಿ ಶ್ರೀ ಸೈಯದ್ ನಜರೂದ್ದಿನ್ ರವರು ಮಾತನಾಡಿ, 6ನೇ ಅಡ್ಡರಸ್ತೆ ಬಾಲಾಜಿನಗರ ಪ್ರದೇಶದಲ್ಲಿ ಹಾಲಿ ಮಳೆ ಸುರಿಯುತ್ತಿರುವುದರಿಂದ ಸೊಳ್ಳೆಗಳು ಜಾಸ್ತಿಯಾಗಿದ್ದು, ಸಾಂಕ್ರಾಮಿಕ ರೋಗಗಳು ಹರಡುವ ಸಂಭವವಿರುತ್ತದೆ. ಆದುದರಿಂದ ಸೊಳ್ಳೆ ಔಷದಿಯನ್ನು ಸಿಂಪಡಿಸಲು ಸಭೆಗೆ ತಿಳಿಸಿದರು. ಈ ಬಗ್ಗೆ ಸಭೆಗೆ ಹಾಜರಿದ್ದ ಶ್ರೀ.ಮಲ್ಲಿಕಾರ್ಜುನ್ ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, ಸದರಿ ಪ್ರದೇಶಕ್ಕೆ ಫಾಗಿಂಗ್ ಮತ್ತು ಸೊಳ್ಳೆ ಔಷದಿಯನ್ನು ಸಿಂಪಡಿಸಲು ಕ್ರಮಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು. ಈ ಬಗ್ಗೆ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಿದ್ದ ಪೊಲೀಸ್ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿ ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳಲು ತಿಳಿಸಿದರು.

6) ಸಭೆಗೆ ಹಾಜರಿದ್ದ ಶ್ರೀ.ಬಿ.ಟಿ.ಕೃಷ್ಣಮೂರ್ತಿ ರವರು ಮಾತನಾಡಿ, ಬಾಲಾಜಿನಗರ ಸುತ್ತಮುತ್ತಲಿನ ಪ್ರದೇಶದ ರಸ್ತೆಗಳ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದ್ದು ಕಂಡುಬಂದಿದೆ. ಹಾಲಿ ಇದ್ದ ಕಾಂಕ್ರೀಟ್ ರಸ್ತೆಗಳನ್ನು ತೆಗೆದಿದ್ದರಿಂದ ಅಲ್ಲಿನ ವಾಹನ ಸವಾರರಿಗೆ ತೊಂದರೆಯಾಗುತ್ತಿರುತ್ತದೆ ಅದಲ್ಲದೇ ಹಾಲಿ ಮಳೆ ಸುರಿಯುತ್ತಿರುವುದರಿಂದ ತೊಂದರೆಯಾಗುತ್ತಿರುತ್ತದೆ. ಆದುದರಿಂದ ಸದರಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕೆಂದು ಸಭೆಗೆ ತಿಳಿಸಿದರಿ. ಈ ಬಗ್ಗೆ ವಾರ್ಡ್ ಅಭಿಯಂತರರು ಮಾತನಾಡಿ, ಅಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಆದಷ್ಟು ಬೇಗ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮವಹಿಸುವುದಾಗಿ ಸಭೆಗೆ ತಿಳಿಸಿದರು.

7) ಸಭೆಗೆ ಹಾಜರಿದ್ದ, ಶ್ರೀ ರಮೇಶ್ ರವರು ಮಾತನಾಡಿ, ತಾವರೆಕೆರೆ ಮುಖ್ಯರಸ್ತೆಯ ಟ್ರಾನ್ಸ್‌ಫಾರ್ಮನ ಕಂಬವನ್ನು ಬದಲಾಸಿರುವ ಸಂದರ್ಭ ಸದರಿ ಕಾಮಗಾರಿಯ ಅನುಪಯುಕ್ತ ಮಣ್ಣು ಮತ್ತು ಅವಶೇಷಗಳು ಹಾಗೆಯೇ ಬಿದ್ದಿರುವುದು ಕಂಡುಬಂದಿರುತ್ತದೆ ಎಂದು ಸಭೆಗೆ ತಿಳಿಸಿದರು. ಈ ಬಗ್ಗೆ ಮಾನ್ಯ ಸಭಾಧ್ಯಕ್ಷರು ಮಾತನಾಡಿ, ಕೂಡಲೇ ಸದರಿ ಡೆಬ್ರೀಸ್‌ನ್ನು ತೆರವುಗೊಳಿಸಲು ಸಭೆಗೆ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.

8) ಶ್ರೀ.ಬಿ.ಟಿ.ಕೃಷ್ಣಮೂರ್ತಿಯವರು ಮಾತನಾಡಿ, ಟಾಮ್ & ಜರ್‍ರಿ ಬೇಕರಿ ಪ್ರದೇಶದ ಸುತ್ತಮುತ್ತ ಹಾಗೂ ಕೃಷ್ಣ ಇಂಡಸ್ಟ್ರೀಯಲ್ ಪ್ರದೇಶದ ಸುತ್ತಮುತ್ತಲಿನ ಸಾರ್ವಜನಿಕ ಪ್ರದೇಶದಲ್ಲಿ ಕಾಲೇಜು ವಿದ್ಯಾರ್ಥಿಗಳು ಮತ್ತು ಯುವಕ-ಯುವತಿಯರು ಧೂಮಪಾನ ಮತ್ತು ಇತರೆ ಅಹಿತಕರ ಚಟುವಟಿಗಳು ನಡೆಸುತ್ತಿರುವುದು ಕಂಡುಬಂದಿರುತ್ತದೆ ಈ ಬಗ್ಗೆ ಕಠಿರ್ಣ ಕ್ರಮಗಳು ಜರುಗಿಸಲು ಸಭೆಗೆ ತಿಳಿಸಿದರಿ. ಈ ಸಂಬಂಧ ಮಾನ್ಯ ಅಧ್ಯಕ್ಷರು ಮಾತನಾಡಿ, ಪ್ರಸ್ತಾಪಿತ ಪ್ರದೇಶಗಳನ್ನು ಪರಿವೀಕ್ಷಣೆ ಮಾಡಿ, ಸಾರ್ವಜನಿಕ ಪ್ರದೇಶದಲ್ಲಿ ಧೂಮಪಾನ ಮಾಡುವವರನ್ನು ಗುರುತಿಸಿ, ದಂಡವನ್ನು ವಿಧಿಸಲು ಕ್ರಮ ಕೈಗೊಳ್ಳಬೇಕೆಂದು ಸಭೆಗೆ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷರಿಗೆ, ಮಾರ್ಷಲ್‌ಗಳಿಗೆ ಮತ್ತು ಪೊಲೀಸ್ ಅಧಿಕಾರಿಗಳಿಗೆ ತಿಳಿಸಿದರು.

9) ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಪ್ರಸ್ತಾಪಿಸಲಾಗಿ, ಶ್ರೀ ಅಜಯ್ ಕಿರಿಯ ಆರೋಗ್ಯ ಪರಿವೀಕ್ಷರು ಮಾತನಾಡಿ ವಾರ್ಡ್ ಪ್ರದೇಶದಲ್ಲಿ ಒಣತ್ಯಾಜ್ಯ ಮತ್ತು ಹಸಿ ತ್ಯಾಜ್ಯ ಸಮರ್ಪಕವಾಗಿ ಸಂಗ್ರಹಿಸಿ ವಿಲೇವಾರಿ ಮಾಡಲಾಗುತ್ತಿರುತ್ತದೆ ಮತ್ತು ಬ್ಲಾಕ್ ಸ್ಪಾಟ್‌ಗಳ ಸಂಖ್ಯೆಗಳು ಆದಷ್ಟು ಕಡಿತಗೊಳಿಸಲು ಶ್ರಮವಹಿಸಲಾಗುತಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಸಭೆ ಅಧ್ಯಕ್ಷರು ಮಾತನಾಡಿ, ಹಾಲಿ ಮುಂಗಾರು ಮಳೆಗಾಲ ಪ್ರಾರಂಭವಾಗುವುದರಿಂದ ವಾರ್ಡ್ ಮಟ್ಟದ ರಸ್ತೆಗಳು ನಿರ್ವಹಣೆ ರಸ್ತೆಗುಂಡಿ ಮುಚ್ಚುವುದು ಮತ್ತು ಮಳೆ ನೀರು ಸರಾಗವಾಗಿ ಹರಿಯುವಂತೆ ಚರಂಡಿಗಳನ್ನು ಸ್ವಚ್ಛಗೊಳಿಸುವುದು ಮತ್ತು ಮಳೆಗಾಲದಲ್ಲಿ ಅಂಟುರೋಗಗಳನ್ನು ಹರಡದಂತೆ ತಮ್ಮ ತಮ್ಮ ಪ್ರದೇಶವನ್ನು ಸ್ವಚ್ಛವಾಗಿ ಇಟ್ಟುಕೊಳ್ಳವುದು ಎಂದು ತಿಳಿಸುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ರಾತ್ರಿ ಸಮಯದಲ್ಲಿ ತುರ್ತು ಪರಿಸ್ಥಿತಿಯನ್ನು ನಿರ್ವಹಣೆಮಾಡಲು ಉಪವಿಭಾಗದ ವ್ಯಾಪ್ತಿಯಲ್ಲಿ ತಾತ್ಕಾಲಿಕ ನಿಯಂತ್ರಣ ಕೇಂದ್ರವನ್ನು ಸ್ಥಾಪಿಸಲಾಗಿದ್ದು, ಅದರ ಉಪಯೋಗವನ್ನು ಪಡೆಯಲು ವಾರ್ಡ್ ಅಭಿಯಂತರರಿಗೆ ಸೂಚಿಸುತ್ತಾ, ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| (ಶ್ರೀ. ಸತೀಶ್.ಡಿ) | (ಶ್ರೀ. ಅಶೋಕ್.ಎಸ್.ಬಿರಾದಾರ) |
| ಕಾರ್ಯದರ್ಶಿಗಳು | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| ವಾರ್ಡ್-152 ಎಸ್.ಜಿ.ಪಾಳ್ಯ | ವಾರ್ಡ್-152 ಎಸ್.ಜಿ.ಪಾಳ್ಯ |

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ. ಸ
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೋರಮಂಗಲ ಉಪ-ವಿಭಾಗ ರವರಿಗೆ ಮುಂದಿನ ಕ್ರಮಕ್ಕೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ(ದ) ರವರಿಗೆ ಮುಂದಿನ ಕ್ರಮಕ್ಕೆ.